## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2019-20ನೇ ಸಾಲಿನ ಕೇಂದ್ರ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಉನ್ನತಾಧಿಕಾರ ಸಮಿತಿಯು ಅನುಮೋದಿಸಿರುವ ಅನುದಾನದಡಿ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ್(ಆರ್.ಜಿ.ಎಸ್.ಎ) ಯೋಜನೆಯಡಿ ರಾಜ್ಯದ ಮಟ್ಟದ ಇ-ಎನೆಬಲ್ಮೆಂಟ್ (E-enablement) ಘಟಕದ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಜಿಪಸ 2012(ಪಿ-3), ದಿನಾಂಕ: 29-07-2013.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 182 ಜಿಪಸ 2014, ದಿನಾಂಕ:26-02-2015.
3. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 213 ಜಿಪಸ .2015, ದಿನಾಂಕ:27-02-2016.
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 98 ಜಿಪಸ 2016, ದಿನಾಂಕ:06-03-2017.
5. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 260 ಜಿಪಸ 2017, ದಿನಾಂಕ:08-01-2018.
6. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 56 ಜಿಪಸ 2019, ದಿನಾಂಕ:31-08-2019.
7. 2019ನೇ ಫೆಬ್ರವರಿ 22 ಮತ್ತು 23 ರಂದು ಪಂಚಾಯತ್ ರಾಜ್ ಮಂತ್ರಾಲಯದ ಆರ್.ಜಿ.ಎಸ್.ಎ.ಯೋಜನೆಯಡಿಯ ಕೇಂದ್ರ ಉನ್ನತಾಧಿಕಾರ ಸಮಿತಿ ಸಭೆಯ ಸಭಾ ನಡವಳಿಗಳು.
8. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅನಧಿಕೃತ ಟಿಪ್ಪಣಿ ಸಂಖ್ಯೆ:ಗ್ರಾಅಪ 19 ಗ.ಕೋಶ 2018, ದಿನಾಂಕ:05-09-2019.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅಧ್ಯಕ್ಷತೆಯಲ್ಲಿ ಆಯೋಜಿಸಿದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯ ಸಭಾ ನಡವಳಿ ದಿನಾಂಕ:19-09-2019.

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರದಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಮತ್ತು ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ನೂತನ ಯೋಜನೆ, ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ. 2018-19ನೇ ಸಾಲಿನಿಂದ 'ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆ'ಯ ಹೆಸರಿನಲ್ಲಿ ಪುನರ್ ರಚಿಸಲಾಗಿದೆ.

ಮೇಲೆ ಓದಲಾದ ಉಲ್ಲೇಖ(1)ರಲ್ಲಿನ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ. ಮೇಲೆ ಓದಲಾದ(7)ರನ್ವಯ 2019ನೇ ಫೆಬ್ರವರಿ 22 ಮತ್ತು 23 ರಂದು ಪಂಚಾಯತ್ ರಾಜ್ ಮಂತ್ರಾಲಯದ ಆರ್.ಜಿ.ಎಸ್.ಎ.ಯೋಜನೆಯಡಿಯ ಕೇಂದ್ರ ಉನ್ನತಾಧಿಕಾರ ಸಮಿತಿ ಸಭೆಯಲ್ಲಿ ಕರ್ನಾಟಕ ರಾಜ್ಯದ ಆರ್.ಜಿ.ಎಸ್.ಎ. ಕ್ರಿಯಾಯೋಜನೆಯನುಸಾರ ರೂ.52.71ಕೋಟಿಗಳ ಮೊತ್ತಕ್ಕೆ ಅನುಮೋದನೆ ದೊರೆತಿರುತ್ತದೆ. ಇದರಲ್ಲಿ e-Enablement of Panchayath ಎಂಬ ಚಟುವಟಿಕೆಗೆ ರೂ.1.32 ಕೋಟಿಗಳಿಗೆ ಅನುಮೋದನೆ ನೀಡಿರುತ್ತದೆ. ಅಲ್ಲದೇ, ಮೇಲೆ ಓದಲಾದ(8)ರ ಅನಧಿಕೃತ ಟಿಪ್ಪಣಿಯಲ್ಲಿ ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರು ರೂ.1,67,85,264/-ಗಳನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಕೇಂದ್ರ ಉನ್ನತಾಧಿಕಾರ ಸಮಿತಿ ಸಭೆಯಿಂದ ಅನುಮೋದನೆಗೊಂಡ ರೂ.1.32ಕೋಟಿಗಳೊಂದಿಗೆ ರೂ.35,85,264/-ಗಳು ಒಟ್ಟಾರೆ ರೂ.1,67,85,264/-ಗಳನ್ನು ರಾಜ್ಯದ ಪಾಲಿನ ಅನುದಾನದಿಂದ ಹೆಚ್ಚುವರಿಯಾಗಿ ಭರಿಸುವಂತೆ ಕೋರಿರುವ ಹಿನ್ನೆಲೆಯಲ್ಲಿ ಮೇಲೆ ಓದಲಾದ(9)ರ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಅನುಮೋದನೆಗೊಂಡಿರುತ್ತದೆ.

ರಾಜ್ಯ ಮಟ್ಟದ ಇ-ಎನೆಬಲ್ಮೆಂಟ್(E-enablement) ಘಟಕದ ಸಂಬಂಧಿಸಿದಂತೆ ರಾಜ್ಯ ಯೋಜನಾ ವ್ಯವಸ್ಥಾಪಕರು ಹಾಗೂ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳಿಗೆ ಸಂಭಾವನೆಗಳನ್ನು ನೀಡುವ ಸಲುವಾಗಿ 2014-15ನೇ ಸಾಲಿನ ಅನುದಾನ ರೂ.1,15,00,000/-ಗಳನ್ನು ಮೇಲೆ ಓದಲಾದ (2)ರ ಆದೇಶದ ಮೂಲಕ ಬಿಡುಗಡೆ ಮಾಡಲಾಗಿತ್ತು. ಮೇಲೆ ಓದಲಾದ (3)ರ ಆದೇಶದ ಮೂಲಕ 2015-16ನೇ ಸಾಲಿನ ಅನುದಾನ ರೂ.1,37,00,000/-ಗಳನ್ನು ಬಿಡುಗಡೆಗೊಳಿಸಲಾಗಿತ್ತು. ಮೇಲೆ ಓದಲಾದ(4)ರ ಆದೇಶದ ಮೂಲಕ 2016-17ನೇ ಸಾಲಿನ ಅನುದಾನ ರೂ.1,32,00,000/-ಗಳನ್ನು ಮತ್ತು ಮೇಲ ಓದಲಾದ(5)ರ ಆದೇಶದ ಮೂಲಕ 2017-18ನೇ ಸಾಲಿನ ಅನುದಾನ

ರೂ.1,32,00,000/-ಗಳನ್ನು ಹಾಗೂ ಮೇಲೆ ಓದಲಾದ(6)ರ ಆದೇಶದ ಮೂಲಕ 2018-19ನೇ ಸಾಲಿನ ಅನುದಾನ ರೂ.1,32,00,000/-ಗಳನ್ನು ಬಿಡುಗಡೆಗೊಳಿಸಲಾಗಿರುತ್ತದೆ.

ಮುಂದುವರೆದು, ಮೇಲೆ ಓದಲಾದ(7) ಮತ್ತು (9)ರ ಸಭಾ ನಡವಳಿಗಳ ತೀರ್ಮಾನದಂತೆ ರಾಜ್ಯ ಮಟ್ಟದ ಇ-ಎನೆಬಲ್ಮೆಂಟ್(E-enablement) ಘಟಕದಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಯೋಜನಾ ವ್ಯವಸ್ಥಾಪಕರು ಹಾಗೂ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳಿಗೆ ಸಂಭಾವನೆಗಳನ್ನು ನೀಡುವ ಸಲುವಾಗಿ ರೂ.1,67,85,264/-ಗಳ ಅನುದಾನವನ್ನು ಬಿಡುಗಡೆಗೊಳಿಸಲು ಸರ್ಕಾರ ನಿರ್ಧರಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 56 ಜಿಪಸ 2019, ದಿನಾಂಕ:01-10-2019.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, 2019-20ನೇ ಸಾಲಿಗೆ ಸಂಬಂಧಿಸಿದಂತೆ ರಾಜ್ಯ ಮಟ್ಟದ ಇ-ಎನೆಬಲ್ಮೆಂಟ್(E-enablement) ಘಟಕದಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಯೋಜನಾ ವ್ಯವಸ್ಥಾಪಕರು ಹಾಗೂ ಜಿಲ್ಲಾ ಯೋಜನಾ ವ್ಯವಸ್ಥಾಪಕರುಗಳಿಗೆ ಸಂಭಾವನೆಗಳನ್ನು ನೀಡುವ ಸಲುವಾಗಿ ರೂ.1,67,85,264/-ಗಳ ಅನುದಾನವನ್ನು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ್(ಆರ್.ಜಿ.ಎಸ್.ಎ) ಯೋಜನೆ ಅನುದಾನದಿಂದ ಬಿಡುಗಡೆಗೊಳಿಸಲು ಆದೇಶಿಸಿದೆ. "ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ(ಆರ್.ಜಿ.ಪಿ.ಎಸ್.ಎ)ಯೋಜನೆ"ಯ ಹೆಸರಿನಲ್ಲಿ ರಾಜ್ಯ ಸರ್ಕಾರದ ವತಿಯಿಂದ ಬ್ಯಾಂಕ್ ಆಫ್ ಬರೋಡಾ, ಇಂದಿರಾ ನಗರ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 052110026480 ಯಿಂದ ಜಿ-ಸೇವಾ ಶಾಖೆಯಲ್ಲಿರುವ ರಾಜ್ಯ ಮಟ್ಟದ ಇ-ಪಂಚಾಯತ್‌ನ ಉಳಿತಾಯ ಖಾತೆ ಸಂಖ್ಯೆ:64095462822(IFSC Code SBIN0040016) ರೂ.1,67,85,264/-(ಒಂದು ಕೋಟಿ ಅರವತ್ತೇಳು ಲಕ್ಷದ ಎಂಬತ್ತೈದು ಸಾವಿರದ ಎರಡು ನೂರ ಅರವತ್ತಾಲ್ಕು ರೂಪಾಯಿಗಳು ಮಾತ್ರ)ಗಳನ್ನು ಆನ್‌ಲೈನ್ ಮೂಲಕ ವರ್ಗಾಯಿಸಲು ಆದೇಶಿಸಲಾಗಿದೆ.

**ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.**

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಅನುದಾನಕ್ಕೆ ಸನ್ನದು ಲೆಕ್ಕಿಗರಿಂದ ಲೆಕ್ಕ ತಪಾಸಣೆಯನ್ನು ಮಾಡಿಸಿ, ನಿಗಧಿತ ನಮೂನೆ (GFR 12-C [(See Rule 239)] ಅನುಬಂಧ-1 ರಲ್ಲಿ ಲಗತ್ತಿಸಿದೆ) ಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ನಿರ್ದೇಶಕರು, ಇ-ಗವರನೆನ್ಸ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಂದ ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರಿಗೆ ಸಲ್ಲಿಸುವುದು. ಇದರ ಜೊತೆಗೆ Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.
3. ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ್ (ಆರ್.ಜಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಈ ಆರ್ಥಿಕ ವರ್ಷದ ಅಂತ್ಯದಲ್ಲಿ ಆಗಮಿಸುವರು.

ಈ ಅನುದಾನವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 01 ಟಿಎಫ್‌ಪಿ 2019, ದಿನಾಂಕ: 03-04-2019ರಲ್ಲಿ ತಿಳಿಸಿದಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ :ಎಫ್‌ಡಿ 1 ಟಿಎಫ್‌ಪಿ 2019, ದಿನಾಂಕ: 04-07-2019ರನ್ವಯ ಆಯಾ ಇಲಾಖೆಯ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರದತ್ತಗೊಳಿಸಲಾಗಿರುವ ಅಧಿಕಾರದನ್ವಯ ಬಿಡುಗಡೆಗೊಳಿಸಲು ಆದೇಶ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

K.S. Mahalaxmi 1/10/19
(ಕೆ.ಎಸ್.ಮಹಾಲಕ್ಷ್ಮಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಗೆ,

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
4. ನಿರ್ದೇಶಕರು, ಇ-ಗವರನೆನ್ಸ್ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
5. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

6. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.